ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1568
ಸದಸ್ಯರ ಹೆಸರು : ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ : 20.03.2020
ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಕ್ರ.ಸಂ.	ಪ್ರಶ್ನೆ	ಉತ್ತರ
(ಅ)	ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಬಿಲ್ ಕಲೆಕ್ಟರ್ ಹುದ್ದೆಯಿಂದ ಕಾರ್ಯದರ್ಶಿ ಹುದ್ದೆಗೆ ಹಾಗೂ ಕಾರ್ಯದರ್ಶಿ ಹುದ್ದೆಯಿಂದ ಕಾರ್ಯನಿರ್ವಾಹಕ ಅಧಿಕಾರಿ ಹುದ್ದೆಗೆ ಹಾಗೂ ಕಾರ್ಯನಿರ್ವಾಹಕ ಅಧಿಕಾರಿಗಿಂತ ಉನ್ನತ ಹುದ್ದೆಗೆ ಪದೋನ್ನತಿ ಹೊಂದಿದವರ ಸಂಖ್ಯೆ ಎಷ್ಟು;	ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಗ್ರಾಮ ಪಂಚಾಯತಿಗಳ ಬಿಲ್ ಕಲೆಕ್ಟರ್ ಹುದ್ದೆಯಿಂದ ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್–2 ಹುದ್ದೆಗೆ ಆಯ್ಕೆ ಮೂಲಕ ನೇರ ನೇಮಕಾತಿಗೊಂಡವರ ಸಂಖ್ಯೆ: 3645. ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್–2 ಹುದ್ದೆಯಿಂದ ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್–1 ಹುದ್ದೆಗೆ ಪದೋನ್ನತಿ ಹೊಂದಿದ ನೌಕರರ ಸಂಖ್ಯೆ: 2555. ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್–1 ಹುದ್ದೆಯಿಂದ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹುದ್ದೆಗೆ ಪದೋನ್ನತಿ ಹೊಂದಿದ ನೌಕರರ ಸಂಖ್ಯೆ: 1767. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹುದ್ದೆಯಿಂದ ಸಹಾಯಕ ನಿರ್ದೇಶಕರು (ಗ್ರಾಮೀಣ ಉದ್ಯೋಗ) ಹುದ್ದೆಗೆ ಪದೋನ್ನತಿ ಹೊಂದಿದ ನೌಕರರ ಸಂಖ್ಯೆ: 143. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹುದ್ದೆಯಿಂದ ಸಹಾಯಕ ನಿರ್ದೇಶಕರು (ಗ್ರಾಮೀಣ ಉದ್ಯೋಗ) ಹುದ್ದೆಯಿಂದ ಕಾರ್ಯನಿರ್ವಾಹಕ ಅಧಿಕಾರಿ ಹುದ್ದೆಗೆ ಪದೋನ್ನತಿ ಹೊಂದಿದ ನೌಕರರ ಸಂಖ್ಯೆ: 71. ಕಾರ್ಯನಿರ್ವಾಹಕ ಅಧಿಕಾರಿ ಹುದ್ದೆಯಿಂದ ಉಪಕಾರ್ಯದರ್ಶಿ (ಹಿರಿಯ ಶ್ರೇಣಿ) ಹುದ್ದೆಗೆ ಪದೋನ್ನತಿ ಹೊಂದಿದ ನೌಕರರ ಸಂಖ್ಯೆ: 19.
(ಆ)	ಈ ರೀತಿಯಾದಂತ ಪದೋನ್ನತಿಯನ್ನು ನೀಡಲು ಅನುಸರಿಸಬೇಕಾದಂತಹ ಮಾನದಂಡಗಳೇನು?	ಕರ್ನಾಟಕ ಸಾಮಾನ್ಯ ಸೇವೆ (ಸ್ಥಳೀಯ ಆಡಳಿತ ಶಾಖೆ ಮತ್ತು ಅಭಿವೃದ್ಧಿ ಶಾಖೆ) ವೃಂದ ಮತ್ತು ನೇಮಕಾತಿ ನಿಯಮಗಳ ಅನುಸಾರ ಗ್ರಾಮ ಪಂಚಾಯತಿಯ ಬಿಲ್‌ಕಲೆಕ್ಟರ್ ವೃಂದದಿಂದ ಜೇಷ್ಠತಾ ಪಟ್ಟಿ ಆಧರಿಸಿ, ಲಭ್ಯವಾಗುವ ಹುದ್ದೆಗಳ ಆಧಾರದ ಮೇಲೆ ಅರ್ಹ ನೌಕರರು ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್–2 ಹುದ್ದೆಗೆ ಆಯ್ಕೆ ಮೂಲಕ ನೇರ ನೇಮಕಾತಿ ಹೊಂದಿ, ತದನಂತರ ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್–2 ಹುದ್ದೆಯಿಂದ ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್–1, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಸಹಾಯಕ ನಿರ್ದೇಶಕರು (ಗ್ರಾಮೀಣ ಉದ್ಯೋಗ) ಕಾರ್ಯನಿರ್ವಾಹಕ ಅಧಿಕಾರಿ ಮತ್ತು ಉಪಕಾರ್ಯದರ್ಶಿ (ಹಿರಿಯ ಶ್ರೇಣಿ) ಹುದ್ದೆವರೆಗೆ ಜೇಷ್ಠತೆ ಮತ್ತು ಅರ್ಹತೆ ಆಧಾರದ ಮೇಲೆ ಲಭ್ಯವಾಗುವ ಹುದ್ದೆಗಳಿಗೆ ಇಲಾಖಾ ಪದೋನ್ನತಿ ಸಮಿತಿ ನಿರ್ಣಯದಂತೆ ಪದೋನ್ನತಿ ನೀಡಲು ಕ್ರಮವಹಿಸಬೇಕಾಗುತ್ತದೆ.

ಸಂ. ಗ್ರಾಅಪ 306 ಗ್ರಾಪಂಅ 2020

(ಕೆ.ಎಸ್.ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು